## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2013-14ನೇ ಸಾಲಿಗೆ ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಗೆ ಸಹಾಯಧನ ಮಂಜೂರು ಮಾಡುವ ಬಗ್ಗೆ.

40

ಕೃಷಿ ಆಯುಕ್ತರ ಕಛೇರಿ
32H1
11 FEB 2014
ಶೀಘ್ರಾದಿ, ಕಿ...

ಓದಲಾಗಿದೆ: 1. ಸರ್ಕಾರದ ಆದೇಶ ಸಂ: ಕೃಇ/27/ಕೃಯೋಕಾ/2013, ದಿ:05-04-2013 ಮತ್ತು ದಿ:06-08-2013.

2. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಮೈಸೂರು ರವರ ಪತ್ರ ಸಂ: ರಾಗ್ರಾಸಂ/ತರಬೇತಿ/38(III)96-97, ದಿ: 21-10-2013.

3. ಕೃಷಿ ಆಯುಕ್ತರ ಪತ್ರ ಸಂ:ಪಿಎಲ್‌ಎನ್/ತಾಂ-4/ANSSIRD/2013-14, ದಿ: 22-10-2013 ಮತ್ತು ದಿ: 21-12-2013.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2013-14 ನೇ ಸಾಲಿನಲ್ಲಿ ಕೃಷಿ ಇಲಾಖೆಯ ಚಾಲ್ತಿ ಯೋಜನೆಗಳನ್ನು 2013-14ನೇ ಸಾಲಿಗೆ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಿದೆ. 2013-14 ನೇ ಸಾಲಿನ ಪರಿಷ್ಕೃತ ಆಯವ್ಯಯದನ್ವಯ ಸಂಪುಟ-6 ರಲ್ಲಿ ಕೃಷಿ ಇಲಾಖೆಯ 20 ರಾಜ್ಯವಲಯಗಳ ಯೋಜನೆಗಳಲ್ಲಿನ ಹಾಲಿ ವಿವಿಧ ಲೆಕ್ಕ ಶೀರ್ಷಿಕೆಗಳನ್ನು 05 ಯೋಜನೆಗಳನ್ನಾಗಿ ಸಮ್ಮಿಲನಗೊಳಿಸಿ ಮಾರ್ಪಡಿಸಿ 2013-14ನೇ ಸಾಲಿನಲ್ಲಿ ದಿ: 01-04-2013 ರಿಂದ 31-03-2014ರ ವರೆಗೆ ಮಂಜೂರಾತಿ ನೀಡಿದೆ.

ಮೇಲೆ (2) ರಲ್ಲಿ ಓದಲಾದ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ರವರು ಸಂಸ್ಥೆಯ ಉಪಗ್ರಹ ಆಧಾರಿತ ತರಬೇತಿ ಕೇಂದ್ರದ ಉನ್ನತೀಕರಣಕ್ಕಾಗಿ ರೂ.5.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೃಷಿ ಆಯುಕ್ತರನ್ನು ಕೋರಿರುತ್ತಾರೆ.

ಮೇಲೆ (3) ರಲ್ಲಿ ಓದಲಾದ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ, 2013-14ನೇ ಸಾಲಿನಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆಗೆ ಸಹಾಯಾನುದಾನ ನೀಡುವ ಸಲುವಾಗಿ 2013-14ನೇ ಸಾಲಿನ ಆಯವ್ಯಯದಲ್ಲಿ ರೂ.5.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ:2401-00-800-1-40 (ಯೋಜನೆ) "ಇತರೆ ಕೃಷಿ ಯೋಜನೆಗಳು" ಉಪ ಲೆಕ್ಕ ಶೀರ್ಷಿಕೆಯ 100 ರಡಿ ಅನುದಾನವನ್ನು ಒದಗಿಸಿಕೊಡುವುದರಿಂದ ಸದರಿ ಸಂಸ್ಥೆಯು ಸಲ್ಲಿಸುವ ಬಿಲ್ಲುಗಳಿಗೆ ಕೃಷಿ ನಿರ್ದೇಶಕರು ಮೇಲು ಸಹಿ ಮಾಡುವ ಅಧಿಕಾರವನ್ನು ನೀಡಿ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ/121/ಕೃಯೋಕಾ/2013, ಬೆಂಗಳೂರು,**
**ದಿನಾಂಕ: 05-02-2014.**

PLN

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2013-14ನೇ ಸಾಲಿನ ಇತರೆ ಕೃಷಿ ಯೋಜನೆಗಳು ಚಾಲ್ತಿ ಯೋಜನೆಯ ಲೆಕ್ಕ ಶೀರ್ಷಿಕೆ:2401-00-800-1-40 ಅಡಿ ಈಗಾಗಲೇ ಬಿಡುಗಡೆಗೊಳಿಸಿರುವ ತ್ರೈಮಾಸಿಕ ಅನುದಾನದ ಮೊತ್ತದಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆಗೆ ರೂ.5.00 ಲಕ್ಷಗಳನ್ನು (ಐದು ಲಕ್ಷ ರೂಪಾಯಿಗಳು ಮಾತ್ರ) ಉಪಗ್ರಹ ಆಧಾರಿತ ತರಬೇತಿ ಕೇಂದ್ರದ ಉನ್ನತೀಕರಣಕ್ಕಾಗಿ ಬಳಸಲು ಅನುಮತಿ ನೀಡಿದೆ. ಸದರಿ ಸಂಸ್ಥೆಯು ಸಲ್ಲಿಸುವ ಬಿಲ್ಲಿಗೆ ಕೃಷಿ ನಿರ್ದೇಶಕರಿಗೆ ಮೇಲು ಸಹಿ ಮಾಡುವ ಅಧಿಕಾರ ನೀಡಿ ಆದೇಶಿಸಿದೆ.

..2..

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂ: ಕೃಇ/83/ಆಂಆಸ/2013, ದಿ: 17-01-2014 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ್ ಪಾಟೀಲ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
3. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4. ಮಹಾಲೇಖಪಾಲರು, (ಲೆಕ್ಕ ಪತ್ರ ಮತ್ತು ತನಿಖೆ) ಕರ್ನಾಟಕ, ಬೆಂಗಳೂರು.
5. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
6. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು-570 011.
7. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
9. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
10. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
14. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.